# <u>ಮಂಗಳೂರು ವಿಶ್ವವಿದ್ಯಾನಿಲಯ</u>

ದಿನಾಂಕ 04.09.2024ರಂದು ಪೂರ್ವಾಹ್ನ ಗಂಟೆ 10.30ಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟು ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2024ನೇ ಸಾಲಿನ ಐದನೇ ಸಾಮಾನ್ಯ ಸಭೆಯ ನಡವಳಿಗಳು

**ಉಪಸ್ಥಿತರು:**

| ಕ್ರ.ಸಂ | | | ಸಹಿ |
|---|---|---|---|
| 1. | ಪ್ರೊ ಪಿ ಎಲ್.ಧರ್ಮ<br>ಕುಲಪತಿಗಳು | ಅಧ್ಯಕ್ಷರು | |
| 2. | ಡಾ ರಾಮೇಗೌಡ ಎಂ<br>ಜಂಟಿ ನಿರ್ದೇಶಕರು,(ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 3. | ಪ್ರೊ ಎಂ ಜಯಶಂಕರ್<br>ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ | ಸದಸ್ಯರು | |
| 4. | ಡಾ ಎಸ್.ಬಿ ಎಂ ಪ್ರಸನ್ನ | ಸದಸ್ಯರು | |
| 5. | ಡಾ ಕೆ.ಸಿ. ಮಹದೇಶ | ಸದಸ್ಯರು | |
| 6. | ಡಾ. ಶಂಕರಮೂರ್ತಿ ಎಚ್.ಕೆ | ಸದಸ್ಯರು | |
| 7. | ಡಾ ವರದರಾಜ ಸಿ ಎಚ್. | ಸದಸ್ಯರು | |
| 8. | ಫಾದರ್ ಡಾ ಮೈಕಲ್ ಸಂತುಮಯೋರ್ | ಸದಸ್ಯರು | |
| 9. | ಶ್ರೀ ಸುರೇಶ್ ಕುಮಾರ್ ಬಿ. ನಾವೂರು | ಸದಸ್ಯರು | |
| 10. | ಶ್ರೀ. ಸಿ.ಎ. ನಿತಿನ್ ಜೆ ಶೆಟ್ಟಿ | ಸದಸ್ಯರು | |
| 11. | ಶ್ರೀಮತಿ ಜೂಡಿತ್ ಮೆಂಡೋನ್ಸ | ಸದಸ್ಯರು | |
| 12. | ಶ್ರೀ ರಘುರಾಜ್ | ಸದಸ್ಯರು | |
| 13. | ಶ್ರೀ ಅಚ್ಯುತ ಗಟ್ಟಿ | ಸದಸ್ಯರು | |
| 14. | ಶ್ರೀ ಮಹಮ್ಮದ್ ಸವಾದ್ | ಸದಸ್ಯರು | |
| 15. | ಪ್ರೊ ಹೆಚ್. ದೇವೇಂದ್ರಪ್ಪ<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |
| 16. | ಪ್ರೊ ಸಂಗಪ್ಪ ವೈ<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ<br>ಆಹ್ವಾನಿತರು | |
| 17. | ಶ್ರೀ ಕೆ ರಾಜು ಮೊಗವೀರ, ಕೆ.ಎ.ಎಸ್.<br>ಕುಲಸಚಿವರು (ಆಡಳಿತ) | ಸದಸ್ಯ<br>ಕಾರ್ಯದರ್ಶಿ | |

**ಅನುಪಸ್ಥಿತರು:**

| | | |
|---|---|---|
| 1. | ಡಾ. ಸಂದೇಶ್ ಕೆ.ಎಸ್<br>(ವೈದ್ಯಕೀಯ ಶಿಕ್ಷಣ ನಿರ್ದೇಶಕರ ಪರವಾಗಿ) | ಸದಸ್ಯರು |
| 2. | ಡಾ ಜೋಶ್ನ ರಾವ್ ಕೆ | ಸದಸ್ಯರು |

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

**ಕೃತಜ್ಞತೆ:**

ಮಾನ್ಯ ಆಯುಕ್ತರು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರ ಪರವಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸಭೆಗಳಿಗೆ ಹಾಜರಾಗುತಿದ್ದ ಡಾ. ಸಿಪ್ರಿಯನ್ ಮೊಂತೆರೋ ಪ್ರಾಂಶುಪಾಲರು ಹಾಗೂ ಸಹ ನಿರ್ದೇಶಕರು, ಸರಕಾರಿ ಶಿಕ್ಷಕ ಶಿಕ್ಷಣ ಮಹಾವಿದ್ಯಾಲಯ ಮಂಗಳೂರು ಇವರು ಸ್ಥಾನಪನ್ನ ಬಡ್ತಿಯ ಮೇರೆಗೆ ನಿರ್ದೇಶಕರು (ಪ್ರಾಥಮಿಕ ಶಿಕ್ಷಣ) ಆಗಿ ಬೆಂಗಳೂರಿಗೆ ವರ್ಗಾವಣೆಗೊಂಡಿರುತ್ತಾರೆ.

ಸದರಿಯವರು ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕಾಗಿ ಇವರಿಗೆ ಸಿಂಡಿಕೇಟ್ ಹಾಗೂ ಮಂಗಳೂರು ವಿಶ್ವವಿದ್ಯಾನಿಲಯದ ಪರವಾಗಿ ಕೃತಜ್ಞತಾ ಪೂರಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

## ಪ್ರಾಸ್ತಾವಿಕ

ಮಾನ್ಯ ಕುಲಪತಿಯವರು ಸಭೆಯಲ್ಲಿ ಮಾತನಾಡುತ್ತಾ, ಈ ಕೆಳಗಿನ ವಿಚಾರಗಳನ್ನು ಸಭೆಯ ಗಮನಕ್ಕೆ ತಂದರು.

- ಮಂಗಳೂರು ವಿಶ್ವವಿದ್ಯಾನಿಲಯವು ಜೂನ್/ಜುಲೈ 2024ರಲ್ಲಿ ನಡೆಸಿದ ಎಲ್ಲಾ ಪದವಿ ಮಟ್ಟದ ಪರೀಕ್ಷೆಗಳ ಮೌಲ್ಯಮಾಪನ ಕಾರ್ಯವನ್ನು ಅತೀ ಶೀಘ್ರದಲ್ಲಿ ಮುಗಿಸಿ, ಮೌಲ್ಯಮಾಪನ ಮುಗಿದ ಮೂರು ದಿನಗಳಲ್ಲಿಯೇ ಫಲಿತಾಂಶವನ್ನು ಪ್ರಕಟಿಸಿದ ಕುಲಸಚಿವರು (ಪರೀಕ್ಷಾಂಗ) ಹಾಗೂ ಅವರ ಕಚೇರಿಯ ಎಲ್ಲಾ ಸಿಬ್ಬಂದಿಗಳಿಗೆ ಅಭಿನಂದನೆ ಸಲ್ಲಿಸಲಾಯಿತು.

- ದಿನಾಂಕ 10.09.2024ರಿಂದ ಸ್ನಾತಕೋತ್ತರ ಪದವಿಗೆ ಸಂಬಂಧಿಸಿ ಅತಿಥಿ ಉಪನ್ಯಾಸಕರ ಸಂದರ್ಶನವನ್ನು ನಡೆಸುವುದಾಗಿ ಹಾಗೂ ದಿನಾಂಕ 18.09.2024ರಂದು ಸ್ನಾತಕೋತ್ತರ ಪದವಿ ತರಗತಿಗಳನ್ನು ಪ್ರಾರಂಭಿಸಲಾಗುವುದಾಗಿ ತಿಳಿಸಲಾಯಿತು.
- ದಿನಾಂಕ 05.09.2024ರಂದು ಶಿಕ್ಷಕರ ದಿನಾಚರಣೆಯನ್ನು ಮಂಗಳೂರು ವಿಶ್ವವಿದ್ಯಾನಿಲಯದ ಯು.ಆರ್.ರಾವ್ ಸಭಾಂಗಣದಲ್ಲಿ ಆಚರಿಸುವುದಾಗಿ ಹಾಗೂ ಅದೇ ದಿನ ವಿಶ್ವವಿದ್ಯಾನಿಲಯದಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುವ ಶಿಕ್ಷಕರು ಹಾಗೂ 2024ನೇ ಸಾಲಿನಲ್ಲಿ "ಪೇಟೆಂಟ್" ಪಡೆದ ಶಿಕ್ಷಕರುಗಳನ್ನು ಈ ಸಂದರ್ಭದಲ್ಲಿ ಸನ್ಮಾನಿಸುವುದಾಗಿ ಸಭೆಗೆ ತಿಳಿಸಿದರು.
- ವಿಶ್ವವಿದ್ಯಾನಿಲಯದ ಸಂಸ್ಥಾಪನ ದಿನಾಚರಣೆಯನ್ನು ದಿನಾಂಕ 10.09.2024ರಂದು ಆಚರಿಸಬೇಕಾಗಿದ್ದು, ಮುಖ್ಯ ಅತಿಥಿಗಳಾಗಿ ಜಸ್ಟೀಸ್ ಸಂತೋಷ್ ಹೆಗ್ಡೆಯವರನ್ನು ಆಹ್ವಾನಿಸಿದ್ದು, ಆದರೆ ಅವರು ಸಮಯದ ಅಭಾವದಿಂದ ದಿನಾಂಕ 25.09.2024ರಂದು ಬರುವುದಾಗಿ ತಿಳಿಸಿರುವುದರಿಂದ ಸಂಸ್ಥಾಪನ ದಿನಾಚರಣೆಯನ್ನು ದಿನಾಂಕ 25.09.2024ರಂದು ನಡೆಸುವುದಾಗಿ ಸಭೆಗೆ ತಿಳಿಸಿದರು.
- ದಿನಾಂಕ 07.09.2024ರಂದು ಗಣೇಶೋತ್ಸವ ಆಚರಣೆಯನ್ನು ವಿ. ವಿ. ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯದ ನೇತೃತ್ವದಲ್ಲಿ ಬೆಳಿಗ್ಗೆ ಪ್ರಾರಂಭಿಸಿ ಅದೇ ದಿನದಂದು ವಿದ್ಯಾಗಣಪತಿಯನ್ನು ವಿಸರ್ಜನೆ ಮಾಡಲಾಗುವುದೆಂದು ಸಭೆಗೆ ತಿಳಿಸಿದರು.
- ಅತಿಥಿ ಉಪನ್ಯಾಸಕರ ನೇಮಕಾತಿ ಬಗ್ಗೆ ಕಾರ್ಯಸೂಚಿಯನ್ನು ಮುಂದಿನ ಸಭೆಗೆ ಮಂಡಿಸುವುದಾಗಿ ಮಾನ್ಯ ಕುಲಪತಿಯವರು ಸಭೆಗೆ ತಿಳಿಸಿದರು.

**I. ನಡವಳಿಗಳ ದೃಢೀಕರಣ**

ದಿನಾಂಕ 20.07.2024ರಂದು ನಡೆದ ಸಿಂಡಿಕೇಟಿನ 2024ನೇ ಸಾಲಿನ ಚತುರ್ಥ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ

- **ನಡವಳಿಯನ್ನು ದೃಢೀಕರಿಸಲಾಯಿತು**

**II. ಅನುಸರಣಾ ವರದಿಯ ಅನುಮೋದನೆ**

ದಿನಾಂಕ 21.06.2024ರಂದು ನಡೆದ ಸಿಂಡಿಕೇಟಿನ 2024ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ

- **ಅನುಸರಣಾ ವರದಿಯನ್ನು ಅನುಮೋದಿಸಲಾಯಿತು.**

**III. ಈ ಸಿಂಡಿಕೇಟು ಸಭೆಗೆ ಮಂಡಿಸಲಿರುವ ಕಾರ್ಯಸೂಚಿಗಳು.**

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ: ಸಾ.ಸ.5:1 (2024)**

ವಿಷಯ: ಡಾ ಎಂ ಜಯಶಂಕರ್, ಹಿರಿಯ ಪ್ರಾಧ್ಯಾಪಕರು, ಸೂಕ್ಷ್ಮಾಣು ಜೀವವಿಜ್ಞಾನ ಕೋರ್ಸ್, ಜೀವವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರಿಗೆ Combodia ಇಲ್ಲಿ ಪ್ರಬಂಧ ಮಂಡಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ: ಸಾ.ಸ.5:2 (2024)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಲಿಗೆ ಪ್ರಭಾರ ನಿರ್ದೇಶಕರನ್ನು ನೇಮಕ ಮಾಡಿದ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು. (ಇನ್ನು ಮುಂದಕ್ಕೆ ಪ್ರಭಾರ ನಿರ್ದೇಶಕರನ್ನು ನೇಮಕ ಮಾಡುವಾಗ ಇತರೆ ಹಿರಿಯ ಪ್ರಾಧ್ಯಾಪಕರನ್ನು ಸಂಪರ್ಕಿಸಿ ಅವರ ಪ್ರತಿಕ್ರಿಯೆಯನ್ನು ಪಡೆದು ನೇಮಕ ಮಾಡುವಂತೆ ಸಿಂಡಿಕೇಟ್ ಸದಸ್ಯರಾದ ಡಾ.ಕೆಸಿ. ಮಹದೇಶ ಅವರು ಸೂಚಿಸಿದರು).

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ: ಸಾ.ಸ.5:3 (2024)**

ವಿಷಯ: ಯುಜಿಸಿ ನಿಯಮಾವಳಿ 2018ರ ಪ್ರಕಾರ ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಂ ನಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯ/ಘಟಕ ಕಾಲೇಜುಗಳ ಬೋಧಕರಿಗೆ ವೃತ್ತಿ ಪದೋನ್ನತಿ - ಸ್ಕ್ರೀನಿಂಗ್ ಕಂ ಇವ್ಯಾಲುವೇಶನ್/ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಸ್ಕ್ರೀನಿಂಗ್ ಕಂ ಇವ್ಯಾಲುವೇಶನ್/ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಂಡಿಕೇಟು: ಸಾ.ಸ.5:4 (2024)**

ವಿಷಯ: ಅಧ್ಯಯನ ಮಂಡಳಿಗಳ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಂಡಿಕೇಟು: ಸಾ.ಸ.5:5 (2024)**

ವಿಷಯ: ಪದವಿ ಮಟ್ಟದ ಬಿಸಿನೆಸ್ ಮ್ಯಾನೇಜ್‌ಮೆಂಟ್ ಗ್ರಾಮೀಣ ಅಭಿವೃದ್ಧಿ ಮತ್ತು ಸಹಕಾರ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.5:6 (2024)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ "ಪದ್ಮ-ಶಾಸ್ತ್ರಿ ( Padma-Shastri)" ದತ್ತಿ ಉಪನ್ಯಾಸವನ್ನು ಸ್ಥಾಪಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.5:7 (2024)**

ವಿಷಯ: IQAC, ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿನ ಜೂನ್ 2024 ಮತ್ತು ಜುಲೈ 2024ರ ಚಟುವಟಿಕೆಯ ಮುಖ್ಯಾಂಶದ ವರದಿಯನ್ನು ಅವಗಾಹನೆಗೆ ಮಂಡಿಸುವ ಬಗ್ಗೆ

**ನಿರ್ಣಯ:** IQAC, ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿನ ಜೂನ್ 2024 ಮತ್ತು ಜುಲೈ 2024ರ ಚಟುವಟಿಕೆಯ ಮುಖ್ಯಾಂಶದ ವರದಿಯನ್ನು ಪ್ರೊ. ಎಂ.ಜಯಶಂಕರ್., ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ, ಮಂಗಳೂರು ವಿಶ್ವವಿದ್ಯಾನಿಲಯ, ಇವರು ಸಭೆಗೆ ಸವಿಸ್ತಾರವಾಗಿ ವಿವರಿಸಿದರು

ಮುಂದುವರಿದು, ಈ ಹಿಂದೆ ಸಿಂಡಿಕೇಟಿನಲ್ಲಿ ನಿರ್ಧಾರ ಆಗಿದ್ದಂತೆ ಮಂಗಳಗಂಗೋತ್ರಿ ಕ್ಯಾಂಪಸ್ಸಿನ ಎಲ್ಲಾ ವಿಭಾಗಗಳ 3 ವರ್ಷಗಳ ಶೈಕ್ಷಣಿಕ ಚಟುವಟಿಕೆಗಳ ಬಗೆಗಿನ ವಿಸ್ತೃತವಾದ ವರದಿಯನ್ನು ತಯಾರಿಸಿ ಅದನ್ನು PPT ಮೂಲಕ ಮಂಡಿಸಿದರು. ವರದಿಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ: ಸಾ.ಸ.5:8 (2024)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕರ್ತವ್ಯದಲ್ಲಿರುವಾಗಲೇ ನಿಧನ ಹೊಂದಿದ ಸಿಬ್ಬಂದಿಗಳ ಅವಲಂಭಿತರಿಗೆ ಅನುಕಂಪದ ಆಧಾರದಲ್ಲಿ ಉದ್ಯೋಗ ನೀಡುವ ಬಗ್ಗೆ.

**ನಿರ್ಣಯ:** ಶ್ರೀ ಶೋನ್ ಮೊವಿನ್ ವೇಗಸ್ - ಇವರಿಗೆ ದ್ವಿತೀಯ ದರ್ಜೆ ಸಹಾಯಕ ಹಾಗೂ ಶ್ರೀಮತಿ ಸುನೀತ - ಇವರಿಗೆ ಪ್ರಥಮ ದರ್ಜೆ ಸಹಾಯಕ ಹುದ್ದೆಗಳಿಗೆ ಅನುಕಂಪದ ಆಧಾರದಲ್ಲಿ ನೇಮಕಾತಿ ಮಾಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ: ಸಾ.ಸ.5:9 (2024)**

ವಿಷಯ: ಶ್ರೀಮತಿ ಗೀತಾ ಕೆ., ಶೀಘ್ರಲಿಪಿಗಾರರು, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಕರ್ನಾಟಕ ಸರ್ಕಾರ ಸಚಿವಾಲಯದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರ ಹುದ್ದೆಗೆ ನೀಯೋಜಿಸಿರುವುದನ್ನು ಒಪ್ಪಂದದ ಆಧಾರದ ನೇಮಕಾತಿ ಎಂದು ಪರಿಗಣಿಸುವ ಬಗ್ಗೆ.

**ನಿರ್ಣಯ:** ಈ ಬಗ್ಗೆ ವಿಸ್ತೃತವಾಗಿ ಚರ್ಚಿಸಲಾಯಿತು. ಈ ವಿಷಯಕ್ಕೆ ಸಂಬಂಧಿಸಿದಂತೆ ಚರ್ಚಿಸಲು ಮತ್ತು ಸಂಪೂರ್ಣ ದಾಖಲೆಗಳನ್ನು ಪರಿಶೀಲಿಸಲು ಹಾಗೂ ನಿರ್ಣಯಿಸಲು ಕಾರ್ಯಸೂಚಿಯನ್ನು ಮುಂದಿನ ಸಭೆಗೆ ಮಂಡಿಸಲು ಸಭೆಯು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** **ಸಾರ್ವತ್ರಿಕ: ಸಾ.ಸ.5:10 (2024)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ ಘಟಕ ಕಾಲೇಜುಗಳಲ್ಲಿರುವ ಸಭಾಂಗಣ, ಆಟದ ಮೈದಾನ ಹಾಗೂ ತರಗತಿ ಕೊಠಡಿಗಳಿಗೆ ಶುಲ್ಕ ನಿಗದಿಪಡಿಸುವ ಬಗ್ಗೆ

**ನಿರ್ಣಯ:** ಅನುಮೋದಿಸಲಾಯಿತು. ಮುಂದುವರಿದು, ಕಾರ್ಯಕಾರಿ ಅಭಿಯಂತರರು ಸರಕಾರ ನಿಗದಿಪಡಿಸಿರುವ ಶುಲ್ಕವನ್ನು ಪರಿಶೀಲಿಸಿ ಮುಂದಿನ ಸಭೆಗೆ ವಿವರಗಳೊಂದಿಗೆ ಕಾರ್ಯಸೂಚಿಯನ್ನು ಮಂಡಿಸುವಂತೆ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಆಡಳಿತ: ಸಾ.ಸ.5:11 (2024)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟು ಸಭೆ ಹಾಗೂ ಇತರ ಸಭೆಗಳಿಗೆ ಹಾಜರಾಗುವ ಅಧಿಕಾರೇತರ ಸದಸ್ಯರಿಗೆ ಮತ್ತು ಸರಕಾರಿ ಸೇವೆಯಲ್ಲಿರುವ ಸದಸ್ಯರುಗಳಿಗೆ ಪ್ರಯಾಣ ಭತ್ಯೆ / ದಿನಭತ್ಯೆ ಮತ್ತು ಉಪಸ್ಥಿತಿ ಭತ್ಯೆ ಪಾವತಿಯ ಕುರಿತು ರಚಿಸಿದ ಪರಿಷ್ಕೃತ ಪರಿನಿಯಮದ ಅನುಮೋದನೆ ಬಗ್ಗೆ

**ನಿರ್ಣಯ:** ಕಾರ್ಯಸೂಚಿಯನ್ನು ಮುಂದೂಡಲಾಯಿತು.

**ಕಾರ್ಯಸೂಚಿ ಸಂಖ್ಯೆ: ಇಡಿ: ಸಾ.ಸ.5:12 (2024)**

ವಿಷಯ: ಶ್ರೀಯುತ ದಯಾನಂದ ನಾಯಕ್, ಮಾಜಿ ಸೈನಿಕರು, ಅಶೋಕನಗರ, ಶೇಡಿಗುರಿ ಇವರ ಕೋರಿಕೆ ಮೇರೆಗೆ ತಡೆಗೋಡೆ ನಿರ್ಮಿಸುವ ಕುರಿತು.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.5:13 (2024)**

ವಿಷಯ: ಟೆಂಡರ್ ತಾಂತ್ರಿಕ ಪರಿಶೀಲನಾ ಸಮಿತಿ ಸಭೆ ಹಾಗೂ ಖರೀದಿ ಸಮಿತಿಯನ್ನು ವಿಲೀನಗೊಳಿಸುವ ಬಗ್ಗೆ

**ನಿರ್ಣಯ:** ಈ ಬಗ್ಗೆ ವಿಸ್ತೃತವಾಗಿ ಚರ್ಚಿಸಲಾಯಿತು. ದರ ಸಂಧಾನ ಪ್ರಕ್ರಿಯೆಯನ್ನು ಹಿಂಪಡೆಯಲಾಗಿದ್ದು, ಖರೀದಿ ಸಮಿತಿ ಮತ್ತು ಟೆಂಡರ್ ತಾಂತ್ರಿಕ ಪರಿಶೀಲನಾ ಸಮಿತಿಗಳನ್ನು ಈ ಹಿಂದಿನಂತೆಯೇ ಉಳಿಸಿಕೊಳ್ಳುವಂತೆ ನಿರ್ಣಯಿಸಲಾಯಿತು

**ಕಾರ್ಯಸೂಚಿ ಸಂಖ್ಯೆ: ಡಿಇವಿ: ಸಾ.ಸ.5:14 (2024)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಅಗತ್ಯವಿರುವ ಬಹುಪಯೋಗಿ ಕಟ್ಟಡವನ್ನು ಮಂಗಳ ಅಲೂಮ್ನಿ ಅಸೋಸಿಯೇಶನ್‌ರವರ ಪ್ರಾಯೋಜಕತ್ವದಲ್ಲಿ ನಿರ್ಮಾಣ ಮಾಡಲು MoU ಮಾಡಿಕೊಳ್ಳುವ ಬಗ್ಗೆ.

**ನಿರ್ಣಯ:** ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಅಗತ್ಯವಿರುವ ಬಹುಪಯೋಗಿ ಕಟ್ಟಡವನ್ನು ಮಂಗಳ ಅಲೂಮ್ನಿ ಅಸೋಸಿಯೇಶನ್‌ರವರ ಪ್ರಾಯೋಜಕತ್ವದಲ್ಲಿ ನಿರ್ಮಾಣ ಮಾಡಲು MoU ಮಾಡಿಕೊಳ್ಳುವ ಪ್ರಸ್ತಾವನೆಯನ್ನು ಸಿಂಡಿಕೇಟು ಅನುಮೋದಿಸಿತು.

ಮುಂದುವರಿದು, ಕ್ರ. ಸಂಖ್ಯೆ 4ರಲ್ಲಿನ "**The MAA Bhavan may be utilized for various academic activities of the University on payment"** ಎಂಬ ಅಂಶವನ್ನು ಸೂಕ್ತ ತಿದ್ದುಪಡಿ ಮಾಡಿಕೊಳ್ಳುವ ಷರತ್ತಿನೊಂದಿಗೆ ಸಭೆಯು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ: ಸಾ.ಸ.5:15 (2024)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜಾದ ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸಿದ

ಸಿಬ್ಬಂದಿಗಳ ವೇತನದ ವ್ಯತ್ಯಾಸದ ಬಾಕಿ ಮೊತ್ತವನ್ನು ಪಾವತಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು: ಸಾ.ಸ.5:16 (2024)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವ್ಯವಹಾರ ಆಡಳಿತ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರ ನೇಮಕಾತಿ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು: ಸಾ.ಸ.5:17 (2024)**

ವಿಷಯ: **ಡಾ ಕೆ .ಸಿ ಮಹದೇಶ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ**

**1**.ಮಂಗಳೂರು ವಿಶ್ವವಿದ್ಯಾನಿಲಯ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಕೇಂದ್ರವನ್ನು ಸ್ಥಾಪನೆ ಮಾಡಲು (ಎಲ್ಲಾ ಸಿವಿಲ್ ಸರ್ವಿಸ್ ಪರೀಕ್ಷೆಗಳು) ಮತ್ತು ಇದನ್ನು ಮಂಗಳೂರು ವಿಶ್ವವಿದ್ಯಾನಿಲಯದ ಉದ್ಯೋಗ ಕೊಡಿಸುವ (Placement Cell) ಕೇಂದ್ರದ ಜೊತೆ ಸಂಪರ್ಕದಿಂದ ಇರುವಂತೆ ನೋಡಿಕೊಳ್ಳುವುದು.

**ನಿರ್ಣಯ:** ಮುಂದಿನ ದಿನಗಳಲ್ಲಿ ಸ್ಪರ್ಧಾತ್ಮಕ ತರಬೇತಿ ಕೇಂದ್ರವನ್ನು ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿ ಸ್ಥಾಪಿಸಿ, ಮಂಗಳೂರು ವಿಶ್ವವಿದ್ಯಾನಿಲಯದ ಉದ್ಯೋಗ ಕೊಡಿಸುವ (Placement Cell) ಕೇಂದ್ರದ ಜೊತೆ ಸಂಪರ್ಕದಿಂದ ಇರುವಂತೆ ನೋಡಿಕೊಳ್ಳುವ ಬಗ್ಗೆ ಸಿಂಡಿಕೇಟ್ ಸದಸ್ಯರಾದ ಡಾ.ಎಸ್.ಬಿ.ಎಂ. ಪ್ರಸನ್ನ ಹಾಗೂ ಡಾ ಕೆ .ಸಿ ಮಹದೇಶ ಇವರ ಪ್ರಸ್ತಾವನೆಯ ಮನವಿಯ ಮೇರೆಗೆ ನಿರ್ಣಯಿಸಲಾಯಿತು.

**2**. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಆರ್ಥಿಕ ಸಂಕಷ್ಟ, ಸೋಶಿಯಲ್ ಮೀಡಿಯಾದಲ್ಲಿ ಇತ್ತೀಚೆಗೆ ಪದೇಪದೇ ಪ್ರಸಾರವಾಗುತ್ತಿದ್ದು, ಇದು ಶೈಕ್ಷಣಿಕ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದ್ದು ಇದು ವಿಶ್ವವಿದ್ಯಾನಿಯಲದ ಘನತೆ ಗೌರವಕ್ಕೆ ಧಕ್ಕೆಯಾಗುವಂತಿದೆ ಮತ್ತು ವಿಶ್ವವಿದ್ಯಾನಿಲಯದಲ್ಲಿ ಕೆಲಸ ಮಾಡುವ ನೌಕರರಿಗೆ ಇಲ್ಲಿಯ ವಿದ್ಯಾರ್ಥಿಗಳಿಗೆ, ಪೋಷಕರಿಗೆ, ವಿಶ್ವವಿದ್ಯಾನಿಲಯದ ಹಿತೈಷಿಗಳಿಗೆ ಇದು ಪರಿಣಾಮ ಬೀರುತ್ತದೆ. ಇದರ ಬಗ್ಗೆ ಚರ್ಚಿಸಿ ಸೂಕ್ತ ನಿರ್ಣಯ ಕೈಗೊಳ್ಳಲು ಕೋರಿದೆ.

**ನಿರ್ಣಯ:** a) ಈ ಬಗ್ಗೆ ವಿಸ್ತೃತವಾಗಿ ಸಭೆಯಲ್ಲಿ ಚರ್ಚಿಸಲಾಯಿತು. ಮಂಗಳೂರು

ವಿಶ್ವವಿದ್ಯಾನಿಲಯದ ಆರ್ಥಿಕ ಸಂಕಷ್ಟದ ಬಗ್ಗೆ ಕುಲಪತಿಗಳು ಮಾತನಾಡಿದ್ದು, ವಿಶ್ವವಿದ್ಯಾನಿಲಯದ ಆರ್ಥಿಕ ಸಂಕಷ್ಟಕ್ಕೆ ಸಂಬಂಧಿಸಿ, ಹಣಕಾಸು ಅಧಿಕಾರಿಗಳು ಒಂದು ವರದಿಯನ್ನು ತಯಾರಿಸುತ್ತಿದ್ದು, ವರದಿಯು ಅಂತಿಮ ರೂಪ ಪಡೆದ ನಂತರ ಸಿಂಡಿಕೇಟು ಸಭೆಗೆ ಮಂಡಿಸಲಾಗುವುದು ಎಂದು ತಿಳಿಸಿದರು.

b) ವಿಶ್ವವಿದ್ಯಾನಿಲಯದ ಆಂತರಿಕ ಆಡಿಟ್ ಕಾರ್ಯದ ಟೆಂಡರ್ ಕಾರ್ಯಕ್ಕೆ ಸಂಬಂಧಿಸಿ ಹಣಕಾಸು ಅಧಿಕಾರಿಯವರು ಟೆಂಡರ್ ಸಮಿತಿಯ ಬಗ್ಗೆ ಸಂಪೂರ್ಣ ಮಾಹಿತಿಯನ್ನು ದಿನಾಂಕ 09.09.2024ರಂದು ನೀಡುವುದಾಗಿ ಸಭೆಯಲ್ಲಿ ತಿಳಿಸಿದರು. ಹಾಗೂ ಟೆಂಡರ್‌ಗೆ ಸಂಬಂಧಿಸಿದ ಮಾಹಿತಿಯನ್ನು ಎಲ್ಲಾ ಸಿಂಡಿಕೇಟು ಸದಸ್ಯರಿಗೆ ಇ-ಮೇಲ್ ಮುಖಾಂತರ ನೀಡಲು ಹಣಕಾಸು ಅಧಿಕಾರಿಯವರಿಗೆ ಕುಲಪತಿಯವರು ಸಭೆಯಲ್ಲಿ ಸೂಚಿಸಿದರು.

c) ಸಿಂಡಿಕೇಟು ಸದಸ್ಯರು ಹಣಕಾಸು ವಿಷಯವಾಗಿ ಸಲ್ಲಿಸಿರುವ ಪ್ರಸ್ತಾವನೆಯನ್ನು ವಿಶೇಷ ಸಿಂಡಿಕೇಟಿನ ಸಭೆ ಕರೆದು ಚರ್ಚಿಸುವಂತೆ ನಿರ್ಣಯಿಸಲಾಯಿತು.

**3**. ವಿಶ್ವವಿದ್ಯಾನಿಲಯದ 2024 ಜನವರಿಯಿಂದ 2024 ಸೆಪ್ಟಂಬರ್ 1ನೇ ತಾರೀಖಿನ ವರೆಗೆ ವಿಶ್ವವಿದ್ಯಾನಿಲಯಕ್ಕೆ ವಿವಿಧ ವಿಭಾಗಗಳಿಂದ ಸಂದಾಯವಾಗಿರುವ ಹಣಕಾಸಿನ ಸಮಗ್ರ ಚಿತ್ರಣವನ್ನು ನೀಡಲು ಮತ್ತು 2024 ಜನವರಿ 1 ರಿಂದ 2024 ಸೆಪ್ಟೆಂಬರ್ 1ನೇ ತಾರೀಖಿನ ವಿಶ್ವವಿದ್ಯಾನಿಲಯದ ವಿವಿಧ ವಿಭಾಗಗಳಿಗೆ ಖರ್ಚು ಮಾಡಿರುವ ಸಮಗ್ರ ಚಿತ್ರಣ ನೀಡಲು ಮತ್ತು ಈ ವಿಷಯವಾಗಿ ಚರ್ಚಿಸಿ ನಿರ್ಣಯಿಸಲು ಕೋರಿದೆ.

**ನಿರ್ಣಯ**: ಈ ಬಗ್ಗೆ ವಿಸ್ತೃತವಾದ ಮಾಹಿತಿಯನ್ನು ಹಣಕಾಸು ಅಧಿಕಾರಿಯವರು ಸಿಂಡಿಕೇಟು ಸಭೆಗೆ ತಿಳಿಸಿದರು. ಮಂಗಳೂರು ವಿಶ್ವವಿದ್ಯಾನಿಲಯದ 2023-24ನೇ ಸಾಲಿನ ಆಂತರಿಕ ಸಂಪನ್ಮೂಲದ ಸಂಪೂರ್ಣ ಮಾಹಿತಿಯನ್ನು ಇ-ಮೇಲ್ ಮುಖಾಂತರ ನೀಡುವಂತೆ ಸದಸ್ಯರು ಕೋರಿರುವ ಮೇರೆಗೆ, ಕುಲಪತಿಯವರು ಹಣಕಾಸು ಅಧಿಕಾರಿಯವರಿಗೆ ಮಾಹಿತಿಯನ್ನು ತುರ್ತಾಗಿ ನೀಡುವಂತೆ ಸಭೆಯಲ್ಲಿ ತಿಳಿಸಿದರು.

**4**. ಪ್ರಸ್ತುತ ವಿಶ್ವವಿದ್ಯಾನಿಲಯದ ಖಜಾನೆಯಲ್ಲಿ ಎಷ್ಟು ಹಣ ಇದೆ (2024 ಸೆಪ್ಟೆಂಬರ್ ವರೆಗೆ) ಮತ್ತು ವಿಶ್ವವಿದ್ಯಾನಿಲಯದ ವಿವಿಧ ವಿಭಾಗಗಳಿಗೆ ಎಷ್ಟು ಹಣ

ಕೋಡಬೇಕಾಗಿದೆ (1) ಉದಾ: ಅತಿಥಿ ಉಪನ್ಯಾಸಕರ ವೇತನ (2)ಹೊರಗುತ್ತಿಗೆ ನೌಕರರ ವೇತನ (3)ಸಿವಿಲ್ ಗುತ್ತಿಗೆದಾರರ ಬಾಕಿ (4)ಇದೇ ರೀತಿ ವಿಶ್ವವಿದ್ಯಾನಿಲಯದಿಂದ ಇತರೆ ವಿಭಾಗಗಳಿಗೆ ಕೊಡಬೇಕಾಗಿರುವ ಬಾಕಿ ಹಣದ ಸಮರ್ಪಕವಾದ ಮಾಹಿತಿ ನೀಡಲು ಕೋರಿದೆ. ಈ ವಿಚಾರವನ್ನು ಸಮಗ್ರವಾಗಿ ಚರ್ಚಿಸಿ ನಿರ್ಣಯಿಸಲು ಕೋರಿದೆ.

**ನಿರ್ಣಯ**: ಈ ಬಗೆಗಿನ ವಿಸ್ತೃತವಾದ ಮಾಹಿತಿಯನ್ನು ಹಣಕಾಸು ಅಧಿಕಾರಿಯವರು ಸಭೆಗೆ ನೀಡಿದರು.

**5.**ಮಂಗಳೂರು ವಿಶ್ವವಿದ್ಯಾನಿಲಯದ ಬಸವೇಶ್ವರ ಅಧ್ಯಯನ ಕೇಂದ್ರದ ಪ್ರಸ್ತಾವನೆಯನ್ನು ಸರಕಾರಕ್ಕೆ ಸಲ್ಲಿಸುವ ವಿಚಾರವಾಗಿ ಆಗಿರುವ ಬೆಳವಣಿಗೆಗಳ ಬಗ್ಗೆ ಮಾಹಿತಿ ನೀಡುವುದು ಮತ್ತು ಅದರ ಮುಂದಿನ ರೂಪುರೇಷೆಗಳ ಬಗ್ಗೆ ಚರ್ಚಿಸಲು ಕೋರಿದೆ.

**ನಿರ್ಣಯ:** ಈ ಬಗ್ಗೆ ಪ್ರಾಧ್ಯಾಪಕರಾದ ಪ್ರೊ.ಸೋಮಣ್ಣ., ಕನ್ನಡ ವಿಭಾಗ, ಇವರು ಇದರ ರೂಪುರೇಷೆಗಳನ್ನು ತಯಾರಿಸಿದ್ದು, ಸದರಿ ಮಾಹಿತಿಯನ್ನು ಮುಂದಿನ ಸಭೆಗೆ ಮಂಡಿಸಲಾಗುವುದು ಎಂದು ಕುಲಪತಿಗಳು ಸಭೆಗೆ ತಿಳಿಸಿದರು.

**ಕಾರ್ಯಸೂಚಿ ಸಂಖ್ಯೆ:** **ಸಿಂಡಿಕೇಟು: ಸಾ.ಸ.5:18 (2024)**

ವಿಷಯ: **ಜಂಟಿ ನಿರ್ದೇಶಕರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ.**

**ನಿರ್ಣಯ:** ವಿಶ್ವವಿದ್ಯಾನಿಲಯ ಕಾಲೇಜು, ಹಂಪನಕಟ್ಟೆ ಇಲ್ಲಿಯ ಗ್ರಂಥಾಲಯ, ಜಂಟಿ ನಿರ್ದೇಶಕರ ಕಛೇರಿ, ವಿಜ್ಞಾನ ವಿಭಾಗಗಳ ಪ್ರಯೋಗಾಲಯಗಳ ಮುಂದಿನ INTER LOCK TILES ರಸ್ತೆಯ ಇನ್ನೊಂದು ಕಡೆಯಿರುವ ತೆರೆದ ಚರಂಡಿ (OPEN DRAINAGE)ಯನ್ನು ಸಿಮೆಂಟ್ ಸ್ಲಾಬ್‌ನಿಂದ ಮುಚ್ಚುವ ಹಾಗೂ ಚರಂಡಿ ಮತ್ತು ಕಾಂಪೌಂಡ್ ಮಧ್ಯೆ ಇರುವ ಜಾಗಕ್ಕೆ ಮುಂದಿನ INTER LOCK TILES ಅಳವಡಿಸಲು ಕಾಮಗಾರಿ ಕೈಗೊಳ್ಳಬೇಕಾಗಿರುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಂಡಿಕೇಟು: ಸಾ.ಸ.5:19 (2024)**

ವಿಷಯ: **ಜಂಟಿ ನಿರ್ದೇಶಕರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ**

ಹಲವು ಅಧ್ಯಯನ ಮಂಡಳಿಗಳ (BOS) ಅಧ್ಯಕ್ಷರು/ಸದಸ್ಯರುಗಳು CREDIT PATTERN ಪಾಲಿಸದೆ, ಅನಗತ್ಯವಾಗಿ ಬೋಧನಾ ಕಾರ್ಯಭಾರ ಹೆಚ್ಚಿಸಿ, ವಿಶ್ವ ವಿದ್ಯಾನಿಲಯದ ಜಾಲ ತಾಣದಲ್ಲಿ ಪಠ್ಯ ಕ್ರಮವನ್ನು upload ಮಾಡಿರುವುದು ಕಂಡುಬಂದಿದೆ. ಈಗಾಗಲೇ ಸಿಂಡಿಕೇಟ್ ಮತ್ತು ಶೈಕ್ಷಣಿಕ ಮಂಡಳಿ ಸಭೆಗಳಲ್ಲಿ ಅಧ್ಯಯನ ಮಂಡಳಿಗಳು ಕಡ್ಡಾಯವಾಗಿ CREDIT PATTERN ಪಾಲಿಸಲು ಸೂಚಿಸಿದ್ದರೂ ಸಹ ಹಲವು (BOS) ಅಧ್ಯಕ್ಷರು/ಸದಸ್ಯರುಗಳು CREDIT PATTERN ಪಾಲಿಸದೇ ಪಠ್ಯಕ್ರಮ ರಚಿಸಿ ಅನಗತ್ಯವಾಗಿ ಸರ್ಕಾರಕ್ಕೆ ಹಾಗೂ ವಿಶ್ವವಿದ್ಯಾನಿಲಯಕ್ಕೆ ಆರ್ಥಿಕ ಹೊರೆ ಉಂಟು ಮಾಡಿರುತ್ತಾರೆ. ಸದರಿಯವರ ಮೇಲೆ ಸೂಕ್ತ ಶಿಸ್ತು ಕ್ರಮ ಜರುಗಿಸಬೇಕಾಗಿರುತ್ತದೆ.

**ನಿರ್ಣಯ**: ಎಲ್ಲಾ ಅಧ್ಯಯನ ಮಂಡಳಿಗೆ CREDIT PATTERNನ್ನು ಮರುರಚನೆ ಮಾಡಲು (1 Credit = 1 Hour Teaching, ಹಾಗೆಯೇ 1 Credit Practical/Field work = 2 Hour Teaching), ಇದನ್ನು ಅನುಸರಿಸಿ ಮರುಮಂಡನೆ ಮಾಡಲು ಸೂಚಿಸುವಂತೆ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಂಡಿಕೇಟು: ಸಾ.ಸ.5:20 (2024)**

ವಿಷಯ: ಪ್ರೊ ಎಂ. ಜಯಶಂಕರ್., ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ

**ನಿರ್ಣಯ:** ಪ್ರಸ್ತಾವನೆಯನ್ನು ಕೈಬಿಡಲಾಯಿತು

**ಕಾರ್ಯಸೂಚಿ ಸಂಖ್ಯೆ:** **ಸಿಂಡಿಕೇಟು: ಸಾ.ಸ.5:21 (2024)**

ವಿಷಯ: ಶ್ರೀ ರಘುರಾಜ್, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ.

1.ಇಂಜಿನಿಯರಿಂಗ್ ವಿಭಾಗದ ತಾಂತ್ರಿಕ ನೌಕರರ ಪದೋನ್ನತಿ ಮಾಡುವಾಗ ST ಸಮುದಾಯಕ್ಕೆ ನೀಡಿರುವ ಹುದ್ದೆಯನ್ನು ಬೇರೊಂದು ವರ್ಗಕ್ಕೆ ನೀಡಿರುವ ಬಗ್ಗೆ ಮಾಹಿತಿ ನೀಡುವುದು.

**ನಿರ್ಣಯ**: ಈ ಬಗ್ಗೆ ಕುಲಸಚಿವರು ಸಮಗ್ರ ಮಾಹಿತಿಯನ್ನು ಸಭೆಗೆ ನೀಡಿದರು. ಸದರಿ ವಿಷಯವು ನ್ಯಾಯಾಲಯದಲ್ಲಿರುವುದರಿಂದ ಕಾನೂನಿನ ಸಲಹೆ ಪಡೆದು

ಮುಂದಿನ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು.

2. ಹೊರಗುತ್ತಿಗೆ ಆಧಾರದಲ್ಲಿ ನೇಮಕಗೊಂಡಿರುವ ನೌಕರರ ಸಮಗ್ರ ಮಾಹಿತಿ ಮತ್ತು ವಿಳಾಸ ಹಾಗೂ ನೀಡುತ್ತಿರುವ ವೇತನದ ಮಾಹಿತಿ.

**ನಿರ್ಣಯ**: ಈ ಬಗ್ಗೆ ಕುಲಸಚಿವರು ಸಮಗ್ರ ಮಾಹಿತಿಯನ್ನು ಸಭೆಗೆ ನೀಡಿದರು. ಅಂಕಿ-ಅಂಶಗಳನ್ನು ಕ್ರೋಢೀಕರಿಸಿ ವೇತನ ಪಾವತಿಯಾಗಿರುವ ಕ್ರಮವನ್ನು ಮಾನ್ಯ ಸಿಂಡಿಕೇಟಿನ ಎಲ್ಲಾ ಸದಸ್ಯರಿಗೆ ಇ-ಮೇಲ್ ಮೂಲಕ ನೀಡುವಂತೆ ಹಣಕಾಸು ಅಧಿಕಾರಿಯವರಿಗೆ ಕುಲಪತಿಗಳು ಸೂಚಿಸಿದರು.

3. ವಿಶ್ವವಿದ್ಯಾನಿಲಯವಯ ಸಂಗ್ರಹಿಸುವ ರೂ ೮೦೦/- ಕ್ರೀಡಾ ಶುಲ್ಕದಲ್ಲಿ ಸರಕಾರಿ ಕಾಲೇಜುಗಳಿಗೆ ರೂ. 400/- ರೂಪಾಯಿಯನ್ನು ನೀಡುವಂತೆ ಮನವಿ. 2022-23, 2023-24 ಸಾಲಿನ ವಿ.ವಿ.ಯಿಂದ ಕ್ರೀಡೆಗೆ ಸಂಬಂಧಪಟ್ಟಂತೆ ಬಾಕಿ ಇರುವ ಮೊತ್ತದ ಬಗ್ಗೆ ಮಾಹಿತಿ.

**ನಿರ್ಣಯ**: ವಿಶ್ವವಿದ್ಯಾನಿಲಯವು ಸಂಗ್ರಹಿಸುವ ರೂ ೮೦೦/- ಕ್ರೀಡಾ ಶುಲ್ಕದಲ್ಲಿ ಸರಕಾರಿ ಕಾಲೇಜುಗಳಿಗೆ ರೂ. 400/- ನೀಡುವ ಬಗ್ಗೆ ಪರಿಶೀಲಿಸಿ ನಿರ್ಣಯ ಕೈಗೊಳ್ಳಲು ಕ್ರೀಡಾ ಸಲಹಾ ಸಮಿತಿಗೆ ಮರು ಪರಿಶೀಲನೆಗೆ ವಿಷಯವನ್ನು ಮಂಡಿಸುವುದು ಎಂದು ನಿರ್ಣಯಿಸಲಾಯಿತು.

2022-23, 2023-24 ಸಾಲಿನ ವಿ.ವಿ. ಯಿಂದ ಕ್ರೀಡೆಗೆ ಸಂಬಂಧಪಟ್ಟಂತೆ ಬಾಕಿ ಇರುವ ಮೊತ್ತದ ಬಗ್ಗೆ ಹಣಕಾಸು ಅಧಿಕಾರಿಯವರು ಸಮಗ್ರ ಮಾಹಿತಿಯನ್ನು ಸಭೆಗೆ ನೀಡಿದರು. ಈ ಬಗ್ಗೆ ಕುಲಪತಿಗಳು, ಅಂಕಿ-ಅಂಶಗಳೊಂದಿಗೆ ಮುಂದಿನ ಸಭೆಗೆ ವಿವರವಾದ ಮಾಹಿತಿಯನ್ನು ನೀಡುವಂತೆ ಹಣಕಾಸು ಅಧಿಕಾರಿಯವರಿಗೆ ಸೂಚಿಸಿದರು.

ಮುಂದುವರಿದು, ಕ್ರೀಡೆಯಲ್ಲಿ ಪದಕ ವಿಜೇತರಿಗೆ ಸನ್ಮಾನಿಸುವ ಕಾರ್ಯಕ್ರಮವನ್ನು ಈ ವರ್ಷದಿಂದ ಆರಂಭಿಸುವುದಾಗಿ ಕುಲಪತಿಯವರು ಸಭೆಗೆ ತಿಳಿಸಿದರು.

**ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು: ಸಾ.ಸ.5:22 (2024)**

ವಿಷಯ: ಶ್ರೀ ಸುರೇಶ್ ಕುಮಾರ್ ಬಿ, ನಾವೂರು, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ.

1. ವಿಶ್ವವಿದ್ಯಾನಿಲಯಕ್ಕೆ PM USHA ಅನುದಾನದಡಿಯಲ್ಲಿ ಮಂಜೂರಾಗಿರುವ ರೂ.20 ಕೋಟಿ ಪಡೆಯಲಾಗಿರುತ್ತದೆಯೋ, ಇಲ್ಲವಾದಲ್ಲಿ ಸದ್ರಿ ಮಂಜೂರಾದ ಅನುದಾನ ಪಡೆಯುವಲ್ಲಿ ಸಮಸ್ಯೆಗಳ ಬಗ್ಗೆ ವಿವರ.

**ನಿರ್ಣಯ**: ಸರ್ಕಾರದಿಂದ ವಿಶ್ವವಿದ್ಯಾನಿಲಯಕ್ಕೆ PM USHA ಅನುದಾನದಡಿಯಲ್ಲಿ ಮಂಜೂರಾಗಿರುವ ರೂ.20 ಕೋಟಿ ಅನುದಾನದ ಬಗ್ಗೆ ಇದುವರೆಗೂ ಯಾವುದೇ ಮಾಹಿತಿ ಬಂದಿರುವುದಿಲ್ಲವೆಂದು ನಿರ್ದೇಶಕರು, PME Board ಇವರು ತಿಳಿಸಿರುವುದಾಗಿ ಮಾನ್ಯ ಕುಲಪತಿಯವರು ಸಭೆಗೆ ತಿಳಿಸಿದರು.

2. ವಿಶ್ವವಿದ್ಯಾನಿಲಯದ ಅಂತರಾಷ್ಟ್ರೀಯ ವಸತಿ ನಿಲಯದ ನಿರ್ಮಾಣಕ್ಕೆ ವಿಶ್ವವಿದ್ಯಾನಿಲಯದಿಂದ ವರ್ಗಾವಣೆಯಾಗಿರುವ ಹಣಕಾಸು ಮೊತ್ತಗಳ ಬಗ್ಗೆ ದಾಖಲೆ ಸಮೇತ ವಿವರ ಹಾಗೂ Arbitration ವ್ಯಾಜ್ಯದ ಎಲ್ಲಾ ಪತ್ರಗಳನ್ನು ಸಭೆಯಲ್ಲಿ ಮಂಡಿಸುವುದು.

**ನಿರ್ಣಯ**: ವಿಶ್ವವಿದ್ಯಾನಿಲಯದ ಅಂತರಾಷ್ಟ್ರೀಯ ವಸತಿ ನಿಲಯದ ನಿರ್ಮಾಣಕ್ಕೆ ಸಂಬಂಧಿಸಿ ಸರಕಾರ ನೇಮಿಸಿದ ನಿವೃತ್ತ ನ್ಯಾಯಾಧೀಶರಿಂದ ತನಿಖೆ ನಡೆಸಲಾಗಿದೆ ಎಂದು ತಿಳಿಸಲಾಗಿದ್ದು, ಇದಕ್ಕೆ ಸಂಬಂಧಿಸಿದಂತೆ ಸರಕಾರದ ನಿರ್ದೇಶನದಂತೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ನಿರ್ಣಯಿಸಲಾಯಿತು.

| | |
|---|---|
| **ಕಾರ್ಯಸೂಚಿ ಸಂಖ್ಯೆ:** | **ಸಿಂಡಿಕೇಟು: ಸಾ.ಸ.5:23 (2024)** |
| ವಿಷಯ: | ಫಾದರ್ ಡಾ ಮೈಕಲ್ ಸಂತುಮಯೋರ್, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ |
| **ನಿರ್ಣಯ:** | ಪ್ರಸ್ತಾವನೆಯ ಬಗ್ಗೆ ಚರ್ಚಿಸಿ, ಯಥಾಸ್ಥಿತಿ ಕಾಪಾಡುವಂತೆ ಸಭೆಯು ನಿರ್ಣಯಿಸಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | **ಸಿಬ್ಬಂದಿ: ಸಾ.ಸ.5:24 (2024)** |
| ವಿಷಯ: | ಯುಜಿಸಿ ನಿಯಮಾವಳಿ 2018ರ ಪ್ರಕಾರ ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಂನಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗದ ಬೋಧಕರಿಗೆ ವೃತ್ತಿ ಪದೋನ್ನತಿ-ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸುವ ಬಗ್ಗೆ. |
| **ನಿರ್ಣಯ:** | ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸಲಾಯಿತು. |

**ಕಾರ್ಯಸೂಚಿ ಸಂಖ್ಯೆ:** **ಡಿಇವಿ: ಸಾ.ಸ.5:25 (2024)**

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿರುವ ಬ್ಯಾಂಕ್ ಆಫ್ ಬರೋಡ ಬ್ಯಾಂಕ್ ಕಟ್ಟಡಕ್ಕೆ ಪರವಾನಿಗೆ ಅವಧಿ ಹಾಗೂ ಶುಲ್ಕ ನಿಗದಿಪಡಿಸುವ ಬಗ್ಗೆ.

**ನಿರ್ಣಯ**: ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ: ಸಾ.ಸ.5:26 (2024)**

ವಿಷಯ: ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿಗೆ ನೂತನ ಪ್ರಭಾರ ಪ್ರಾಂಶುಪಾಲರ ನೇಮಕಾತಿಯ ಬಗ್ಗೆ ನಿಯಮಾವಳಿಯನ್ನು ಪರಿಶೀಲಿಸಿ ಕ್ರಮ ಕೈಗೊಳ್ಳುವುದಕ್ಕೆ ಸಂಬಂಧಿಸಿ ರಚಿಸಿದ ಸಮಿತಿ ಸಭೆಯ ನಡವಳಿ ಬಗ್ಗೆ.

**ನಿರ್ಣಯ**: ಸಮಿತಿ ಸಭೆಯ ನಡವಳಿಯನ್ನು ಅನುಮೋದಿಸಲಾಯಿತು. ಈ ಬಗ್ಗೆ ಮುಂದಿನ ಸಭೆಯಲ್ಲಿ ವಿಸ್ತೃತವಾಗಿ ದಾಖಲೆಗಳೊಂದಿಗೆ ಚರ್ಚಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ: ಸಾ.ಸ.5:27 (2024)**

ವಿಷಯ: ಶ್ರೀ ರಿಚರ್ಡ್ ಡಿ'ಸೋಜ, ಪ್ರಥಮ ದರ್ಜೆ ಸಹಾಯಕರು, ಕಾರ್ಯಕಾರಿ ಅಭಿಯಂತರರ ಕಚೇರಿ ಇವರಿಗೆ ವಿಶ್ವವಿದ್ಯಾನಿಲಯದ ಸೇವೆಯಿಂದ ಸ್ವಯಂನಿವೃತ್ತಿ ಹೊಂದಲು ಅನುಮತಿ ನೀಡಿರುವ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

**ಇತರ ವಿಷಯಗಳು:**

1. ಕುಲಸಚಿವ (ಪರೀಕ್ಷಾಂಗ), ಇವರು ಮಂಗಳೂರು ವಿಶ್ವವಿದ್ಯಾನಿಲಯದ ಜೂನ್/ಜುಲೈ 2024ರಲ್ಲಿ ನಡೆಸಿದ ಎಲ್ಲಾ ಪದವಿ ಮಟ್ಟದ ಪರೀಕ್ಷೆಗಳ ಮೌಲ್ಯಮಾಪನ ಕಾರ್ಯವನ್ನು ಅತೀ ಶೀಘ್ರದಲ್ಲಿ ಮುಗಿಸಿ ಫಲಿತಾಂಶವನ್ನು ಮೌಲ್ಯಮಾಪನ ಮುಗಿದ ಮೂರೇ ದಿನಗಳಲಿಯೇ ಪ್ರಕಟಿಸಿದ ಬಗ್ಗೆ ಸಭೆಯ ಗಮನಕ್ಕೆ ತಂದು, ಈ ಪರೀಕ್ಷಾ ಫಲಿತಾಂಶ ಕಾರ್ಯದಲ್ಲಿ ಭಾಗವಹಿಸಿ, ಸಹಕರಿಸಿದ ಎಲ್ಲಾ ಕಾಲೇಜಿನ ಪ್ರಾಂಶುಪಾಲರಿಗೆ, ಪರೀಕ್ಷಾ ಕಾರ್ಯದ ಸಂಯೋಜಕರಿಗೆ, ಪರೀಕ್ಷಾ ಕೇಂದ್ರದ ಎಲ್ಲಾ ಸಿಬ್ಬಂದಿಗಳಿಗೆ, ಕುಲಸಚಿವ(ಪ) ವಿಭಾಗದ ಎಲ್ಲಾ ಸಿಬ್ಬಂದಿಗಳಿಗೆ ಹಾಗೂ ವಿ.ವಿ.ಆಡಳಿತ ಮಂಡಳಿಗೆ ತುಂಬು ಹೃದಯದ ಧನ್ಯವಾದಗಳನ್ನು ಅರ್ಪಿಸಿದರು.

2. ಕುಲಸಚಿವರು (ಪರೀಕ್ಷಾಂಗ), ಇವರು ಸ್ನಾತಕ ಹಾಗೂ ಸ್ನಾತಕೋತ್ತರ ಪದವಿಯ ಅಂತಿಮ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಭೌತಿಕ ಅಂಕಪಟ್ಟಿ ಹಾಗೂ ಪ್ರಮಾಣ ಪತ್ರಗಳನ್ನು ನೀಡುವ ಪ್ರಸ್ತಾವನೆಯನ್ನು ಮಾನ್ಯ ವಿಧಾನ ಸಭಾಧ್ಯಕ್ಷರ ಗಮನಕ್ಕೆ ತಂದಿದ್ದು, ಸಭಾಧ್ಯಕ್ಷರು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಈ ಬಗ್ಗೆ ಅಗತ್ಯ ಕ್ರಮ ವಹಿಸುವಂತೆ ಸೂಚಿಸಿರುವುದನ್ನು ಸಭೆಯ ಗಮನಕ್ಕೆ ತಂದರು.

ಕುಲಪತಿಗಳು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/- | ಸಹಿ/- |
| ಕುಲಸಚಿವರು | ಕುಲಪತಿಯವರು |